ದಿ:07.01.2026 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ: ಶ್ರೀ. ಬಿ ಆರ್ ವಕೀಲರಿಂದ ಅರ್ಜಿದಾರರ ಪರವಾಗಿ:</u>

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಈ ಮೂಲಕ ಸಲ್ಲಿಸುತ್ತಿದ್ದೇನೆ, ಅದರಲ್ಲಿ ಬರೆದಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ.

ಶ್ರೀಮತಿ ಹುಚ್ಚಮ್ಮರವರು ಅರ್ಜಿದಾರಳಾದ ನರಸಮ್ಮರವರಿಗೆ ಬರೆದುಕೊಟ್ಟಂತಹ ಮರಣ ಶಾಸನಕ್ಕೆ ನಾನು ಸಾಕ್ಷಿಯಾಗಿ ಸಹಿ ಮಾಡಿದ್ದು, ನನ್ನ ಸಹಿಯನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿ ನಿಪಿ 1 ಮರಣ ಶಾಸನದಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 1 (ಎ) ಎಂದು ಗುರುತಿಸಲಾಯಿತು. ಹುಚ್ಚಮ್ಮ ಸದರಿ ನಿಪಿ 1 ಮರಣ ಶಾಸನಕ್ಕೆ ತನ್ನ ಎಡಗೈ ಹೆಬ್ಬೆಟ್ಟಿನ ಗುರುತನ್ನು ಹಾಕಿದ ನಂತರ ನಾನು ಸದರಿ ಮರಣ ಶಾಸನಕ್ಕೆ ಸಾಕ್ಷಿಯಾಗಿ ಸಹಿ ಮಾಡಿರುತ್ತೇನೆ. ನನ್ನ ಜೊತೆ ಉದಯಕುಮಾರ್ ಸಾಕ್ಷಿಯಾಗಿ ಸಹಿ ಮಾಡಿರುತ್ತಾರೆ.

<u>ಪಾಟೀ ಸವಾಲು: ಅರ್ಜಿಯನ್ನು ಯಾರೂ ವಿರೋಧಿಸಿರುವುದಿಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಪಂಚಾಕ್ಷರಿ.ಎಂ.)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.